ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯಿತಿ ಕಟ್ಟಡಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

830 (1084) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳಿವೆ; ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ಬಾಡಿಗೆ ಕಟ್ಟಡದಲ್ಲಿರುವ ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ಅನುದಾನ ನೀಡಿ ಸ್ವಂತ ಕಟ್ಟಡ ನಿರ್ಮಿಸಲು ಕೈಗೊಂಡ ಕ್ರಮಗಳೇನು ; ಮಾಹಿತಿ ನೀಡುವುದು ;

(ಈ) ಪ್ರಸ್ತುತ ಮಂಡ್ಯ ಜಿಲ್ಲೆಯಲ್ಲಿ ನಿರ್ಮಿಸುತ್ತಿರುವ ಗ್ರಾಮ ಪಂಚಾಯಿತಿ ಕಟ್ಟಡಗಳ ಸಂಖ್ಯೆ ಎಷ್ಟು ; ತಾಲ್ಲೂಕುವಾರು ಮಾಹಿತಿ ನೀಡುವುದು; ಈ ಕಾಮಗಾರಿಗಳನ್ನು ಯಾವ ಯಾವ ಏಜೆನ್ಸಿಗಳಿಗೆ ನೀಡಲಾಗಿದೆ?